# ಮುಖ್ಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಯಾದಗಿರಿ

## ಸಿ.ಸಿ. ನಂ. **749 / 2021**

ಸಿಡಬ್ಲ್ಯೂ- **2**
ಪಿಡಬ್ಲ್ಯೂ- **3**

ದಿನಾಂಕಃ **21.08.2025.**

ಸಾಕ್ಷಿಗೆ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು

ಸಾಕ್ಷಿಯ ಹೆಸರುಃ - ಮಾರೆಪ್ಪ
ತಂದೆಯ ಹೆಸರುಃ - ಹಣಮಂತ
ವಯಸ್ಸುಃ -? **40** ವರ್ಷ
ಉದ್ಯೋಗಃ - ಕೂಲಿ ಕೆಲಸ.
ವಾಸಸ್ಥಳಃ - ಶಿವನೂರು.

ಮುಖ್ಯ ವಿಚಾರಣೆಃ ಸ.ಸ.ಅ. ರವರಿಂದಃ

ಪೊಲೀಸರು ಶಿವನೂರಿಗೆ ಬಂದಿದ್ದರು ನಾನು ಹೋಲಕ್ಕೆ ಹೋಗುವಾಗ ಪೊಲೀಸರು ನನ್ನನ್ನು ಕರೆದು ಹೆಬ್ಬಟ್ಟಿನ ಗುರುತನ್ನು ಪಡೆದುಕೊಂಡಿದ್ದರು ಆವಾಗ ಅಲ್ಲಿ ಯಾರು ಇರಲಿಲ್ಲ. ಯಾವುದರ ಸಲುವಾಗಿ ನನ್ನ ಹೆಬ್ಬಟ್ಟಿನ ಗುರುತನ್ನು ಪೊಲೀಸರು ಪಡೆದುಕೊಂಡಿದ್ದರು ಎಂದು ನನಗೆ ಗೊತ್ತಿರುವುದಿಲ್ಲ ಸಾಕ್ಷಿಯು ತಾನು ಹೆಬ್ಬಟ್ಟಿನ ಗುರುತು ಹಾಕಿದ ದಾಖಲೆಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ 2 ಎಂದು ಗುರುತಿಸಲಾಗಿರುತ್ತದೆ.ನಿಪಿ 2 ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ. ಸಾಕ್ಷಿಯು ಪೋಟೋಗಳಲ್ಲಿ ತಾನು ಇರುವುದನ್ನು ನೋಡಿ ಗುರುತಿಸಿರುತ್ತಾರೆ ಅವುಗಳನ್ನು ಈಗಾಗಲೇ ನಿಪಿ 3 ಎಂದು ಗುರುತಿಸಲಾಗಿರುತ್ತದೆ. ಪೊಲೀಸರು ನನ್ನ ಸಮಕ್ಷಮ ಜಪ್ತಿಪಂಚನಾಮೆಯನ್ನು ಮಾಡಿ ಯಾವುದೇ ವಸ್ತುಗಳನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲಕರ ಸಾಕ್ಷ್ಯವನ್ನು ನುಡಿದ ಕಾರಣ ಸ.ಸ.ಅಭಿಯೋಜಕರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. )

ಪಾಟೀ ಸವಾಲುಃ ಸ.ಸ.ಅ ರವರಿಂದಃ

ದಿನಾಂಕಃ 11.06.2021 ರಂದು ಬೆಳಗ್ಗೆ 9 ಗಂಟೆಯಿಂದ 10 ಗಂಟೆಯ ವರೇಗೆ ಬೆಣಕನಳ್ಳಿ ಗ್ರಾಮದ ಸೀಮೆಯ ಅಮೀನರೆಡ್ಡಿಗೌಡ ರವರ ಹೊಲದಲ್ಲಿ ಮನೆಯ ಮುಂದೆ ಪಂಚನಾಮೆಯನ್ನು ಮಾಡಿದ್ದರು ಎಂದರೆ ಸರಿಯಲ್ಲ. ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನಿಪಿ 2 ರಂತೆ ಪೊಲೀಸರು ಪಂಚನಾಮೆಯನ್ನು ಮಾಡಿ ಮುದ್ದೆ ಮಾಲು 1 ನ್ನು ಜಪ್ತಿಪಡಿಸಿಕೊಂಡಿದ್ದರು ಎಂದರೆ ಸರಿಯಲ್ಲ.

ಅದೇ ರೀತಿ ನಿಪಿ 3 ನ್ನು ತೆಗೆದಿದ್ದರು ಎಂದರೆ ಸರಿಯಲ್ಲ. ಅದೇ ರೀತಿ ಆ ಕಾಲಕ್ಕೆ ನಿಪಿ 6 ನ್ನು ಪೊಲೀಸರು ತೆಗೆದಿದ್ದರು ಎಂದರೆ ಸರಿಯಲ್ಲ. ನಾನು ನಿಪಿ 2 ನ್ನು ತಯಾರಿಸಿಲು ಪೊಲೀಸರಿಗ ಸಹಕರಿಸಿದ್ದರು ಸಹ ಆರೋಪಿತನಿಗೆ ಸಹಾಯ ಮಾಡಲು ಪಂಚನಾಮೆಯನ್ನು ಮಾಡಿರುವುದಿಲ್ಲ ಎಂದು ಸುಳ್ಳು ಸಾಕ್ಷ್ಯ ಹೇಳಿರುತ್ತೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ.ಎಂ.ವಿ.ಕೆ. ರವರಿಂದಃ

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

<u>ಮರು ವಿಚಾರಣೆಃ ಇಲ್ಲಃ</u>

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚುಗಾರನಿಂದ ಬೆರಳಚ್ಚು ಮಾಡಿಸಲಾಯಿತು)

**ಓ. ಹೇ. ಕೇ. ಸರಿ ಅದೆ.**

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು,
ಯಾದಗಿರಿ.